RNU AIR DHARWAD

**April 7, 2024**
**ALL INDIA RADIO- DHARWAD**
**PRADESH SAMACHARA (KANNADA) 7:05 AM**

**ಮುಖ್ಯಾಂಶಗಳು**

- **ರಾಜ್ಯದಲ್ಲಿ ಇದೇ 26 ರಂದು ಮೊದಲ ಹಂತದ ಲೋಕಸಭಾ ಚುನಾವಣೆ; 384 ನಾಮಪತ್ರಗಳು ಕ್ರಮಬದ್ಧ.**

- **ಬಡ ಜನರಿಗೆ ಉತ್ತಮ ಆರೋಗ್ಯ ಸೇವೆ ಒದಗಿಸುವುದು ಆಸ್ಪತ್ರೆಗಳ ಆಶಯವಾಗಬೇಕು–ಮುಖ್ಯಮಂತ್ರಿ ಸಿದ್ದರಾಮಯ್ಯ.**

- **ಲೋಕಸಭಾ ಚುನಾವಣೆ ಹಿನ್ನೆಲೆ: ಜಿಲ್ಲಾ ಸ್ವೀಪ್ ಸಮಿತಿಗಳಿಂದ ರಾಜ್ಯದಲ್ಲಿ ಮುಂದುವರಿದ ಮತದಾನ ಜಾಗೃತಿ ಕಾರ್ಯಕ್ರಮಗಳು.**

- **ಕರ್ನಾಟಕಕ್ಕೆ ಅನುದಾನ ಹಂಚಿಕೆಯಲ್ಲಿ ತಾರತಮ್ಯ ಆರೋಪ ಸತ್ಯಕ್ಕೆ ದೂರ–ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್.**

**ಈಗ ವಾರ್ತೆಗಳ ವಿವರ**

*******

**ರಾಜ್ಯದಲ್ಲಿ ಇದೇ 26 ರಂದು ನಡೆಯಲಿರುವ ಮೊದಲ ಹಂತದ ಲೋಕಸಭಾ ಚುನಾವಣೆಗೆ ಒಟ್ಟು 14 ಕ್ಷೇತ್ರಗಳಲ್ಲಿ 358 ಅಭ್ಯರ್ಥಿಗಳಿಂದ ಸಲ್ಲಿಕೆಯಾದ 492 ನಾಮಪತ್ರಗಳ ಪೈಕಿ 384 ನಾಮಪತ್ರಗಳು ಕ್ರಮಬದ್ಧವಾಗಿವೆ.**

**ಇದೇ ಏಪ್ರಿಲ್ 5 ರಂದು ನಾಮಪತ್ರಗಳ ಪರಿಶೀಲನೆ ಕಾರ್ಯ ಪೂರ್ಣಗೊಂಡಿದ್ದು, 60 ನಾಮಪತ್ರಗಳು ತಿರಸ್ಕೃತಗೊಂಡಿವೆ ಎಂದು ಮುಖ್ಯ ಚುನಾವಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.**

**ನಾಳೆ ಅಂದರೆ ಸೋಮವಾರ ನಾಮಪತ್ರ ವಾಪಸ್ ಪಡೆಯಲು ಕೊನೆಯ ದಿನವಾಗಿದ್ದು, ಆ ಬಳಿಕ ಚುನಾವಣಾ ಕಣದಲ್ಲಿ ಉಳಿಯುವ ಅಭ್ಯರ್ಥಿಗಳ ಸ್ಪ ್ಟ ಚಿತ್ರಣ ಸಿಗಲಿದೆ.**

**ರಾಜ್ಯದ ಎರಡನೇ ಹಂತದ 14 ಲೋಕಸಭಾ ಕ್ಷೇತ್ರಗಳಿಗೆ ನಾಳೆ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಆರಂಭವಾಗಲಿದ್ದು, ನಾಮಪತ್ರ ಸಲ್ಲಿಕೆಗೆ ಚುನಾವಣಾ ಆಯೋಗ ಅಗತ್ಯ ಕ್ರಮ ಕೈಗೊಂಡಿದೆ.**

*******

ಮುಂಬರುವ ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ರಾಜ್ಯಾದ್ಯಂತ ವಿವಿಧ ಪಕ್ಷಗಳ ಪ್ರಮುಖ ನಾಯಕರು ಬಿರುಸಿನ ಪ್ರಚಾರ ಆರಂಭಿಸಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಕೋಲಾರ ಜಿಲ್ಲೆಯ ಮುಳಬಾಗಲು ತಾಲೂಕಿನ ಕುರುಡುಮಲೆ ದೇವಾಲಯದಲ್ಲಿ ನಿನ್ನೆ ವಿಶೇ ಷ ಪೂಜೆ ಸಲ್ಲಿಸಿ, ಚುನಾವಣಾ ಪ್ರಚಾರ ಆರಂಭಿಸಿದರು. ನಂತರ ರೋಡ್ ಶೋ ನಡೆಯಿತು.

ಮತ್ತೊಂದೆಡೆ ಬಿಜೆಪಿ ನಾಯಕರೂ ಸಹ ವಿವಿಧೆಡೆ ತಮ್ಮ ಪಕ್ಷದ ಅಭ್ಯರ್ಥಿಗಳ ಪರ ಬಿರುಸಿನ ಪ್ರಚಾರ ಕೈಗೊಂಡರು. ಧಾರವಾಡ ಲೋಕಸಭಾ ಕ್ಷೇತ್ರ ವ್ಯಾಪ್ತಿಯ ನಿಗದಿ ಗ್ರಾಮದಲ್ಲಿ ಬಿಜೆಪಿ ಅಭ್ಯರ್ಥಿ ಪ್ರಹ್ಲಾದ್ ಜೋಶಿ ಚುನಾವಣಾ ಪ್ರಚಾರ ಕೈಗೊಂಡರು.

*******

ಬಡ ಜನರಿಗೆ ಕೈಗೆಟಕುವ ದರದಲ್ಲಿ ಉತ್ತಮ ಆರೋಗ್ಯ ಸೇವೆ ಒದಗಿಸುವುದು ಖಾಸಗಿ ಹಾಗೂ ಇತರೆ ಆಸ್ಪತ್ರೆಗಳ ಆಶಯವಾಗಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸಲಹೆ ನೀಡಿದ್ದಾರೆ.

ಬೆಂಗಳೂರಿನ ಮಾರತ್‌ಹಳ್ಳಿಯಲ್ಲಿ ನೂತನವಾಗಿ ಕಾರ್ಯಾರಂಭ ಮಾಡಿರುವ ಕಾವೇರಿ ಆಸ್ಪತ್ರೆ ಉದ್ಘಾಟಿಸಿ ಮಾತನಾಡಿದ ಅವರು, ಆರೋಗ್ಯ ಸೇವೆಗಳು ಸಾರ್ವತ್ರಿಕರಣಗೊಳ್ಳಬೇಕು. ಖಾಸಗಿ ಕ್ಷೇತ್ರದ ಸಹಭಾಗಿತ್ವದಲ್ಲಿ ಉನ್ನತ ಪ್ರಗತಿ ಸಾಧಿಸುವುದು ಅಗತ್ಯ ಎಂದರು.

*******

ಮತದಾನ ಪ್ರಮಾಣ ಹೆಚ್ಚಳ ಸೇರಿದಂತೆ ಚುನಾವಣೆಗೆ ಸಂಬಂಧಿಸಿ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಜಿಲ್ಲಾ ಸ್ವೀಪ್ ಸಮಿತಿಗಳು ವೈವಿಧ್ಯಮಯ ಕಾರ್ಯಕ್ರಮಗಳನ್ನು ಮುಂದುವರಿಸಿವೆ.

ಮತದಾರರಲ್ಲಿ ಚುನಾವಣಾ ಅರಿವು ಮೂಡಿಸಲು ಮೈಸೂರು ಜಿಲ್ಲಾಡಳಿತ ಮತ್ತು ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ವಿಂಟೇಜ್ ಕಾರ್ ರ್‍ಯಾಲಿ ಅಯೋಜಿಸಲಾಗಿತ್ತು. ಮೈಸೂರಿನ ಪುರಭವನದಿಂದ ಆರಂಭಗೊಂಡ ರ್‍ಯಾಲಿ ದೇವರಾಜ್ ಅರಸು ರಸ್ತೆ, ಸಯ್ಯಾಜಿರಾವ್ ರಸ್ತೆಯ ಮೂಲಕ ಪುರಭವನಕ್ಕೆ ಆಗಮಿಸಿ ಕೊನೆಗೊಂಡಿತು.

ಲೋಕಸಭಾ ಚುನಾವಣೆ ಹಿನ್ನೆಲೆ, ಮತದಾನ ಪ್ರಮಾಣ ಹೆಚ್ಚಳ, ವ್ಯವಸ್ಥಿತ ಮತದಾನ, ಮತದಾನ ಪ್ರಕ್ರಿಯೆಯಲ್ಲಿ ಪ್ರತಿಯೊಬ್ಬ ಮತದಾರರ ಪಾಲ್ಗೊಳ್ಳುವಿಕೆ ಕುರಿತು ಅರಿವು ಮೂಡಿಸಲು ಉತ್ತರಕನ್ನಡ ಜಿಲ್ಲೆಯ ಯಲ್ಲಾಪುರದಲ್ಲಿ ಎಲ್ಲ ಗ್ರಾಮ ಪಂಚಾಯತಿಗಳ ಕಸ ವಿಲೇವಾರಿ ಘಟಕದ ಆಟೋ ಟಿಪ್ಪರ್ ಹಾಗೂ ಅಂಗನವಾಡಿ ಕಾರ್ಯಕರ್ತೆಯರ ಜಾಥಾ ಆಯೋಜಿಸಲಾಗಿತ್ತು.

ರಾಮನಗರ ಜಿಲ್ಲೆ ಚನ್ನಪಟ್ಟಣ ತಾಲೂಕು ಸ್ವೀಪ್ ಸಮಿತಿ ವತಿಯಿಂದ ಮತದಾನ ಜಾಗೃತಿ ಅಂಗವಾಗಿ ಸ್ವ-ಸಹಾಯ ಗುಂಪಿನ ಮಹಿಳೆಯರಿಗೆ ರಂಗೋಲಿ ಸ್ಪರ್ಧೆ, ಜಾಥಾ ಹಾಗೂ ಬೀದಿ ನಾಟಕ ಆಯೋಜಿಸಲಾಗಿತ್ತು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ದಿಗ್ವಿಜಯ್ ಬೋಡ್ಕೆ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಮತದಾನ ಜಾಗೃತಿ ಅಭಿಯಾನದಡಿ ಬಾಗಲಕೋಟೆ ಜಿಲ್ಲೆಯ ವಿಶೇಷಚೇತನರು ಮುಂಬರುವ ಲೋಕಸಭಾ ಚುನಾವಣೆಯಲ್ಲಿ ತಪ್ಪದೇ ಮತದಾನ ಮಾಡುವಂತೆ ಜಾಗೃತಿ ಮೂಡಿಸಲು ನಗರದಲ್ಲಿ ಬೈಕ್ ರ್ಯಾಲಿ ಹಮ್ಮಿಕೊಂಡಿದ್ದರು. ಜಿಲ್ಲಾಧಿಕಾರಿ ಜಾನಕಿ ಕೆ.ಎಂ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶಿಧರ ಕುರೇರ ಜಂಟಿಯಾಗಿ ಜಾಥಾಕ್ಕೆ ಚಾಲನೆ ನೀಡಿದರು.

ವಿಜಯಪುರ ಜಿಲ್ಲೆಯ ಆಲಮೇಲ ತಾಲೂಕಿನ ದೇವರನಾವದಗಿ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಹಳ್ಳಕ್ಕೆ ಹೂಳು ತೆಗೆಯುವ ಕಾಮಗಾರಿ ಸ್ಥಳದಲ್ಲಿ ಕಾರ್ಮಿಕರಿಗೆ ಮತದಾನದ ಕುರಿತು ಜಾಗೃತಿ ಮೂಡಿಸಲಾಯಿತು.

ತುಮಕೂರು ಜಿಲ್ಲೆಯ ಎಲ್ಲಾ ಮತಗಟ್ಟೆಗಳಲ್ಲಿಯೂ ಶೇಕಡಾ 100 ರ ಷ್ಟು ಮತದಾನವಾಗಬೇಕೆಂಬ ಉದ್ದೇಶದಿಂದ ಸ್ವೀಪ್ ಸಮಿತಿ ಮತದಾನ ಜಾಗೃತಿ ಹಮ್ಮಿಕೊಂಡಿದೆ ಎಂದು ಜಿಲ್ಲಾ ಪಂಚಾಯತಿ ಕಾರ್ಯನಿರ್ವಹಣಾಧಿಕಾರಿ ಜಿ.ಪ್ರಭು ತಿಳಿಸಿದ್ದಾರೆ. ತುಮಕೂರಿನಲ್ಲಿ ನಿನ್ನೆ ಹಮ್ಮಿಕೊಂಡಿದ್ದ ಟ್ರಾಕ್ಟರ್ ಜಾಥಾಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಮತದಾನ ಜಾಗೃತಿ ಅಭಿಯಾನದಂಗವಾಗಿ ಕಲಬುರಗಿಯಲ್ಲಿ ಸ್ವೀಪ್ ಜಾಗೃತಿಯ ಕಾಲ್ನಡಿಗೆ ಜಾಥಾ ಆಯೋಜಿಸಲಾಗಿತ್ತು. ಮಹಾನಗರಪಾಲಿಕೆ ಸ್ವೀಪ್ ನೋಡಲ್ ಅಧಿಕಾರಿ ಅಬ್ದುಲ್ ರಹೆಮಾನ್ ಜಾಥಾಕ್ಕೆ ಚಾಲನೆ ನೀಡಿ ಮಾತನಾಡಿ, ನಗರ ಪ್ರದೇಶದ ಜನರು ಹೆಚ್ಚಾಗಿ ಮತದಾನ ಮಾಡುವುದಿಲ್ಲ ಎಂದು ಆರೋಪವನ್ನು ದೂರ ಮಾಡಲು ನಗರ ಪ್ರದೇಶದ ವಿದ್ಯಾವಂತ ಮತದಾರರು ಕಡ್ಡಾಯವಾಗಿ ಮತದಾನ ಮಾಡಬೇಕು ಎಂದು ಮನವಿ ಮಾಡಿದರು.

*******

ಅನುದಾನ ಹಂಚಿಕೆ ಹಾಗೂ ತೆರಿಗೆ ಪಾಲಿನ ವಿಚಾರದಲ್ಲಿ ಕರ್ನಾಟಕಕ್ಕೆ ಅನ್ಯಾಯವಾಗಿದೆ ಎಂದು ಕಾಂಗ್ರೆಸ್ ಮಾಡುತ್ತಿರುವ ಆರೋಪ ಸತ್ಯಕ್ಕೆ ದೂರವಾದದ್ದು ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ.

ಬೆಂಗಳೂರಿನಲ್ಲಿ ನಿನ್ನೆ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕರ್ನಾಟಕ ಸೇರಿದಂತೆ ವಿವಿಧ ರಾಜ್ಯಗಳಿಗೆ ವಿಪತ್ತು ನಿರ್ವಹಣೆ ಪರಿಹಾರ ನಿಧಿಯಡಿ ನೆರವು ನೀಡುವ ಪ್ರಸ್ತಾವನೆಗಳು ಉನ್ನತಾಧಿಕಾರ ಸಮಿತಿಯ ಮುಂದೆ ಇದ್ದು, ಚುನಾವಣಾ ಆಯೋಗದ ಅನುಮತಿ ಬಳಿಕವಷ್ಟೇ ತೀರ್ಮಾನ ಕೈಗೊಳ್ಳಲಾಗುವುದು ಎಂದರು.

ರಾಜ್ಯಗಳಿಗೆ ಬಂಡವಾಳ ವೆಚ್ಚಕ್ಕೆ ನೆರವು ನೀಡಬೇಕೆಂಬ ಶಿಫಾರಸ್ಸು ಹಣಕಾಸು ಆಯೋಗದ ವರದಿಯಲ್ಲಿ ಇಲ್ಲ. ಪ್ರಧಾನಿ ನರೇಂದ್ರ ಮೋದಿ ಅವರ ಆಶಯದಂತೆ ಕೇಂದ್ರ ಸರ್ಕಾರ, ರಾಜ್ಯಗಳಿಗೆ 50 ವರ್ಷಗಳ ಅವಧಿಗೆ ಬಡ್ಡಿರಹಿತ ಸಾಲ ನೀಡಿದೆ.ಈ ಬಗ್ಗೆ ಕಾಂಗ್ರೆಸ್ ಪಕ್ಷ ಪ್ರಸ್ತಾಪವನ್ನೇ ಮಾಡುತ್ತಿಲ್ಲ ಎಂದು ಅವರು ಹೇಳಿದರು.

*******

ದೇಶದಲ್ಲಿ ಪ್ರಜಾತಂತ್ರ ವ್ಯವಸ್ಥೆ ಅಪಾಯದಲ್ಲಿದ್ದು, ಸಾಂವಿಧಾನಿಕ ಮೌಲ್ಯಗಳನ್ನು ರಕ್ಷಿಸಬೇಕಾದ ಅನಿವಾರ್ಯತೆ ಇದೆ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೇಳಿದ್ದಾರೆ.

ಜೈಪುರದಲ್ಲಿ ನಿನ್ನೆ ಬೃಹತ್ ಸಾರ್ವಜನಿಕ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಜನತೆ ಪ್ರಜಾಪ್ರಭುತ್ವದ ನೈಜ ಆಶಯಗಳನ್ನು ನಿರೀಕ್ಷಿಸುತ್ತಿದ್ದು, ಅಧಿಕಾರಸ್ಥ ಜನರು ಎಲ್ಲರ ಪ್ರಗತಿಗಾಗಿ ಯೋಜನೆಗಳನ್ನು ರೂಪಿಸಬೇಕು. ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸರ್ಕಾರದ ಆದ್ಯತೆಯಾಗಬೇಕು ಎಂದು ಅವರು ಹೇಳಿದರು.

*******

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ

*******

ಲೋಕಸಭಾ ಚುನಾವಣೆ ಹಿನ್ನೆಲೆ, ಮಂಗಳೂರು ಪೊಲೀಸ್ ಆಯುಕ್ತರ ಕಚೇರಿಯಲ್ಲಿ ನಿನ್ನೆ ಪೊಲೀಸ್ ಮಹಾನಿರ್ದೇಶಕ ಅಲೋಕ್ ಮೋಹನ್ ಅವರು ಪಶ್ಚಿಮ ವಲಯದ ಪೊಲೀಸ್ ಅಧಿಕಾರಿಗಳ ಸಭೆ ನಡೆಸಿದರು.

ಮಂಗಳೂರು ಪೊಲೀಸ್ ಆಯುಕ್ತ ಅನುಪಮ್ ಅಗರ್‌ವಾಲ್, ದಕ್ಷಿಣ ಕನ್ನಡ ಎಸ್‌ಪಿ ರಿ ಷ್ಯಂತ್ ಸಿ.ಬಿ, ಉಡುಪಿ ಎಸ್‌ಪಿ ಡಾ. ಅರುಣ್ ಸೇರಿದಂತೆ ಪಶ್ಚಿಮ ವಲಯದ ಎಲ್ಲ ಎಸ್‌ಪಿಗಳು ಮತ್ತು ಇತರ ಹಿರಿಯ ಅಧಿಕಾರಿಗಳು ಸಭೆಯಲ್ಲಿ ಪಾಲ್ಗೊಂಡಿದ್ದರು.

ಚುನಾವಣೆ ಸಂದರ್ಭದಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡಲು ತೆಗೆದುಕೊಳ್ಳಬೇಕಾದ ಪ್ರಮುಖ ಕ್ರಮಗಳ ಬಗ್ಗೆ ಡಿಜಿಪಿ ಅವರು ಸಭೆಯಲ್ಲಿ ಸೂಚನೆಗಳನ್ನು ನೀಡಿದರು.

*******

ಲೋಕಸಭಾ ಚುನಾವಣೆ ಹಿನ್ನೆಲೆ, ಮಾದರಿ ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ ಅನುಮಾನಾಸ್ಪದ ಬ್ಯಾಂಕ್ ವಹಿವಾಟು ಮತ್ತು ಡಿಜಿಟಲ್ ಪಾವತಿಗಳ ಮೇಲೆ ನಿಗಾ ವಹಿಸಬೇಕು ಎಂದು ಬೆಳಗಾವಿ ಜಿಲ್ಲಾ ಚುನಾವಣಾಧಿಕಾರಿಯೂ ಆಗಿರುವ ಜಿಲ್ಲಾಧಿಕಾರಿ ನಿತೇಶ ಪಾಟೀಲ ಬ್ಯಾಂಕ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಬೆಳಗಾವಿಯಲ್ಲಿ ನಿನ್ನೆ ನಡೆದ ಬ್ಯಾಂಕ್ ಅಧಿಕಾರಿಗಳ ಸಭೆಯಲ್ಲಿ ಈ ಸೂಚನೆ ನೀಡಿದ ಅವರು, ಬೃಹತ್ ಮೊತ್ತದ ವಹಿವಾಟು, ಅನುಮಾನಾಸ್ಪದ ವಹಿವಾಟುಗಳು ಕಂಡು ಬಂದಲ್ಲಿ ಕೂಡಲೇ ಮಾಹಿತಿ ನೀಡಬೇಕು. ಲೋಕಸಭಾ ಚುನಾವಣೆಯಲ್ಲಿ ಆಮಿ ‘ಗಳ ಮೂಲಕ ಮತದಾರರ ಮೇಲೆ ಪ್ರಭಾವ ಬೀರುವ ಅಕ್ರಮ ಯತ್ನಗಳನ್ನು ತಡೆಗಟ್ಟಲು, ಚುನಾವಣಾ ಆಯೋಗವು ಅನುಮಾನಾಸ್ಪದ ಬ್ಯಾಂಕ್ ವಹಿವಾಟುಗಳು ಮತ್ತು ಡಿಜಿಟಲ್ ಪಾವತಿಗಳನ್ನು ಕಟ್ಟುನಿಟ್ಟಾಗಿ ಗಮನಿಸುತ್ತಿದೆ ಎಂದರು.

ಜಿಲ್ಲೆಯಲ್ಲಿ ಸದ್ಯಕ್ಕೆ 5 ಬ್ಯಾಂಕ್‌ಗಳಲ್ಲಿ ಅನುಮಾನಾಸ್ಪದ ವಹಿವಾಟುಗಳ ಕುರಿತು ಮಾಹಿತಿ ಲಭ್ಯವಾಗುತ್ತಿದ್ದು, ಉಳಿದ ಬ್ಯಾಂಕ್‌ಗಳಿಂದ ಮಾಹಿತಿ ಬರಬೇಕಿದೆ. ಬ್ಯಾಂಕ್ ಅಧಿಕಾರಿಗಳು ಕೂಡಲೇ ಅಂತಹ ವಹಿವಾಟಿನ ಕುರಿತು ಮಾಹಿತಿ ಸಲ್ಲಿಸಬೇಕು ಎಂದು ಜಿಲ್ಲಾಧಿಕಾರಿ ಸೂಚನೆ ನೀಡಿದರು.

*******

ಮುಕ್ತ ಹಾಗೂ ನ್ಯಾಯಸಮ್ಮತ ಚುನಾವಣೆ ನಡೆಸಲು ಚುನಾವಣಾ ನೀತಿ ಸಂಹಿತೆ ಉಲ್ಲಂಘನೆಯಾಗದಂತೆ ಪ್ರತಿಯೊಂದು ಘಟನೆಗಳನ್ನು ಸೂಕ್ಷ್ಮವಾಗಿ ಗಮನಿಸಿ, ಅಭ್ಯರ್ಥಿಗಳ ವೆಚ್ಚದ ಬಗ್ಗೆ ನಿಗಾ ವಹಿಸಬೇಕು ಎಂದು ಕರ್ನಾಟಕ ರಾಜ್ಯಕ್ಕೆ ನೇಮಕವಾಗಿರುವ ವಿಶೇ ’ ವೆಚ್ಚ ವೀಕ್ಷಕ ಬಿ.ಮುರುಳಿ ಕುಮಾರ್ ತಿಳಿಸಿದ್ದಾರೆ.

ಮೈಸೂರಿನಲ್ಲಿ ನಿನ್ನೆ ವಿಧಾನಸಭಾ ಕ್ಷೇತ್ರದ ಸಹಾಯಕ ಚುನಾವಣಾ ಅಧಿಕಾರಿಗಳು, ಸಹಾಯಕ ಚುನಾವಣಾ ವೆಚ್ಚ ಸಮಿತಿ ಅಧಿಕಾರಿಗಳು ಹಾಗೂ ಸಮಿತಿಗಳ ನೋಡೆಲ್ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಮಾತನಾಡಿದ ಅವರು, ಚೆಕ್ ಪೋಸ್ಟ್‌ಗಳಲ್ಲಿ ತಪಾಸಣೆಯನ್ನು ತೀವ್ರಗೊಳಿಸಿ, ದಾಖಲೆರಹಿತ ಹಣ ಅಥವಾ ಇನ್ನಿತರೆ ವಸ್ತುಗಳು ಸಾಗಾಣಿಕೆಯಾಗದಂತೆ ನೋಡಿಕೊಳ್ಳಬೇಕು ಎಂದರು.

ಅಧಿಕಾರಿಗಳು ಉಲ್ಲಂಘನೆಯ ದೂರುಗಳನ್ನು ಸ್ವೀಕರಿಸಿದಾಗ ದೂರುಗಳ ನೋಂದಣಿ ಮತ್ತು ಅವುಗಳ ಮೇಲೆ ತೆಗೆದುಕೊಂಡ ಕ್ರಮಗಳನ್ನು ಸಮರ್ಪಕವಾಗಿ ನಿರ್ವಹಿಸಬೇಕು ಎಂದು ಸೂಚನೆ ನೀಡಿದರು.

*******

ಚಿತ್ರದುರ್ಗ ಜಿಲ್ಲಾ ವ್ಯಾಪ್ತಿಯಲ್ಲಿ ಉತ್ಪಾದನೆಯಾಗುವ ಎಲ್ಲಾ ವಿಧದ ಹಸಿರು, ಒಣ ಹಾಗೂ ಸಂಸ್ಕರಿಸಿದ ಮೇವನ್ನು ಜಿಲ್ಲಾ ವ್ಯಾಪ್ತಿಯನ್ನು ಹೊರತುಪಡಿಸಿ ಹೊರ ಜಿಲ್ಲೆಗಳಿಗೆ ಸಾಗಾಣಿಕೆ ಮಾಡುವುದನ್ನು ನಿ ೀಧಿಸಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಆದೇಶಿಸಿದ್ದಾರೆ.

ಪ್ರಸ್ತುತ ಜಿಲ್ಲೆಯಲ್ಲಿ ಬರದ ತೀವ್ರತೆ ಅಧಿಕವಾಗಿದೆ. ಜಾನುವಾರುಗಳಿಗೆ ಮೇವಿನ ಕೊರತೆ ಉಂಟಾಗುವ ಸಾಧ್ಯತೆ ಇದ್ದು, ಈ ಪರಿಸ್ಥಿತಿ ನಿಭಾಯಿಸಲು ಈ ಆದೇಶ ಹೊರಡಿಸಲಾಗಿದೆ. ಆದೇಶ ಉಲ್ಲಂಘಿಸಿ ಹೊರ ಜಿಲ್ಲೆ ಹಾಗೂ ಹೊರ ರಾಜ್ಯಗಳಿಗೆ ಯಾವುದೇ ರೂಪದಲ್ಲಿ ಮೇವು ಸಾಗಾಣಿಕೆ ಮಾಡಿದಲ್ಲಿ, ಅಂತಹವರ ವಿರುದ್ಧ ವಿಪತ್ತು ನಿರ್ವಹಣಾ ಕಾಯ್ದೆಯ ವಿವಿಧ ಕಲಂಗಳಡಿ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಆದೇಶದಲ್ಲಿ ತಿಳಿಸಿದ್ದಾರೆ.

*******

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

ರಾಜ್ಯದಲ್ಲಿ ಇದೇ 26 ರಂದು ಮೊದಲ ಹಂತದ ಲೋಕಸಭಾ ಚುನಾವಣೆ: 384 ನಾಮಪತ್ರಗಳು ಕ್ರಮಬದ್ಧ.

ಬಡ ಜನರಿಗೆ ಉತ್ತಮ ಆರೋಗ್ಯ ಸೇವೆ ಒದಗಿಸುವುದು ಆಸ್ಪತ್ರೆಗಳ ಆಶಯವಾಗಬೇಕು–ಮುಖ್ಯಮಂತ್ರಿ ಸಿದ್ದರಾಮಯ್ಯ.

ಲೋಕಸಭಾ ಚುನಾವಣೆ ಹಿನ್ನೆಲೆ: ಜಿಲ್ಲಾ ಸ್ವೀಪ್ ಸಮಿತಿಗಳಿಂದ ರಾಜ್ಯದಲ್ಲಿ ಮುಂದುವರಿದ ಮತದಾನ ಜಾಗೃತಿ ಕಾರ್ಯಕ್ರಮಗಳು.

ಕರ್ನಾಟಕಕ್ಕೆ ಅನುದಾನ ಹಂಚಿಕೆಯಲ್ಲಿ ತಾರತಮ್ಯ ಆರೋಪ ಸತ್ಯಕ್ಕೆ ದೂರ–ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್.

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು
ನಮ್ಮ ಮುಂದಿನ ರಾಷ್ಟ್ರೀಯ ವಾರ್ತೆ 7 ಗಂಟೆ 35 ನಿಮಿಷಕ್ಕೆ

******